# ಎನ್‌ಐಟಿಕೆ ಘಟಿಕೋತ್ಸವ

ಮಂಗಳೂರು: ರಾಷ್ಟ್ರೀಯ ತಂತ್ರಜ್ಞಾನ ಸಂಸ್ಥೆ ಕರ್ನಾಟಕ (ಎನ್‌ಐಟಿಕೆ), ಸುರತ್ಕಲ್‌ನಲ್ಲಿ 21ನೇ ವಾರ್ಷಿಕ ಘಟಿಕೋತ್ಸವ ಕಾರ್ಯಕ್ರಮವು ನವೆಂಬರ್ 4ರಂದು ಬೆಳಗ್ಗೆ 11 ಗಂಟೆಗೆ ಎನ್‌ಐಟಿಕೆ ಕ್ರೀಡಾ ಸಂಕೀರ್ಣದಲ್ಲಿ ನಡೆಯಲಿದೆ.

ರಕ್ಷಣಾ ಸಚಿವರ ವೈಜ್ಞಾನಿಕ ಸಲಹೆಗಾರ ಮತ್ತು ಡಿಆರ್‌ಡಿಓ ಏರೋನಾಟಿಕಲ್ ಸೊಸೈಟಿ ಆಫ್ ಇಂಡಿಯಾದ ಅಧ್ಯಕ್ಷರಾದ ಡಾ.ಜಿ.ಸತೀಶ್ ರೆಡ್ಡಿ ಹಾಗೂ ತಿರುವನಂತಪುರಂ ಸಿಎಸ್‌ಐಆರ್ ನಿರ್ದೇಶಕರಾದ ಡಾ.ಸಿ.ಆನಂದರಾಮಕೃಷ್ಣನ್ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಸುರತ್ಕಲ್ ಎನ್‌ಐಟಿಕೆ ನಿರ್ದೇಶಕ ಪ್ರೊ.ರ.ಬಿ.ರವಿ ಸಮಾರಂಭದ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

Samyuktha karnataka, Date:03/11/23, p, no - 03